ನಿ-72
ಕ್ರ-55

**<u>ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ</u>**

**<u>ಸೂಚನೆ</u>**

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಕಾಲೇಜು ಶಿಕ್ಷಣ ಹಾಗೂ ತಾಂತ್ರಿಕ ಶಿಕ್ಷಣ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ದೀರ್ಘಕಾಲದಿಂದ ಖಾಯಂ ಪ್ರಾಂಶುಪಾಲರನ್ನು ನೇಮಕಾತಿ ಮಾಡಿಕೊಳ್ಳದೆ ಇರುವುದರಿಂದ ಕಾಲೇಜಿನ ಆಡಳಿತ, ಪರೀಕ್ಷೆ ಕಾರ್ಯ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ತುಂಬಾ ಅಡ್ಡಿ ಉಂಟಾಗಿದೆ. ಈ ಸಂಬಂಧ ಇದುವರೆವಿಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸದೆ ಇರುವುದರಿಂದ ಉಂಟಾಗಿರುವ ಸಮಸ್ಯೆಗಳ ಕುರಿತು.

**<u>ಹೇಳಿಕೆ</u>**

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರದ ಆದೇಶ ಸಂಖ್ಯೆ:ಇಡಿ 91 ಡಿಸಿಇ 2004, ದಿನಾಂಕ:25.09.2009 ರಲ್ಲಿ ಜಾರಿಗೊಳಿಸಲಾಗಿರುವ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಇಡಿ 121 ಡಿಸಿಇ 2018, ದಿನಾಂಕ:11.06.2019 ರಲ್ಲಿ ಒಟ್ಟು 310 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ. ಅದರಂತೆ, 310 ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಆದೇಶ ಸಂಖ್ಯೆ:ಇಡಿ 121 ಡಿಸಿಇ 2018, ದಿನಾಂಕ:09.09.2020 ರಲ್ಲಿ ಪ್ರಕಟಿಸಲಾಗಿದೆ.

ಸದರಿ ವಿಶೇಷ ನಿಯಮಗಳನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, 310 ಪ್ರಾಂಶುಪಾಲರ ಹುದ್ದೆಗಳಿಗೆ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 121 ಡಿಸಿಇ 2018, ದಿನಾಂಕ:21.03.2022 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ದಿನಾಂಕ:13.12.2022ರಂದು ಪ್ರಾಂಶುಪಾಲರ ನೇರ ನೇಮಕಾತಿಗೆ ಅರ್ಜಿ ಆಹ್ವಾನಿಸಿರುತ್ತದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ನಿಯಮಾನುಸಾರ ಆಯ್ಕೆಗೊಂಡ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಸರ್ಕಾರ/ಇಲಾಖೆಗೆ ಸಲ್ಲಿಸಿದ ನಂತರ ನಿಯಮಾನುಸಾರ ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುವುದು.

ಮುಂದುವರೆದು, ಕಾಲೇಜಿನ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಜೇಷ್ಠತೆಯಲ್ಲಿ ಹಿರಿಯರಾದ ಸಹ/ಸಹಾಯಕ ಪ್ರಾಧ್ಯಾಪಕರಿಗೆ ಪ್ರಾಂಶುಪಾಲರ ಕಾರ್ಯವನ್ನು ನಿರ್ವಹಿಸಲು ಸೂಚಿಸಲಾಗಿದ್ದು, ಈ ಮೂಲಕ ಕಾಲೇಜಿನ ಆಡಳಿತ, ಪರೀಕ್ಷಾ ಕಾರ್ಯ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳನ್ನು ಆಯಾ ಸಂಸ್ಥೆಗಳ ಹಿರಿಯ ಬೋಧಕ ವರ್ಗದವರಿಗೆ ತಾತ್ಕಾಲಿಕ ಪ್ರಾಂಶುಪಾಲರ ಹುದ್ದೆಯ ಕಾರ್ಯಭಾರವನ್ನು ನಿರ್ವಹಿಸಲು ಅನುಮತಿ ನೀಡಲಾಗಿದ್ದು, ಈ ಹಿನ್ನೆಲೆಯಲ್ಲಿ ಸದರಿ ಸಂಸ್ಥೆಗಳ ಆಡಳಿತ ಮತ್ತು ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಪ್ರಾಂಶುಪಾಲರ ಹುದ್ದೆಗಳನ್ನು ಎಐಸಿಟಿಇ ನಿಯಮಗಳನ್ವಯ ಭರ್ತಿಮಾಡಬೇಕಾಗಿದ್ದು, ಪ್ರಸ್ತುತ, ಮಾರ್ಚ್ 2019 ರಲ್ಲಿ 07 ನೇ ಪರಿಷ್ಕೃತ ಎಐಸಿಟಿಇ ನಿಯಮಗಳನ್ನು ಜಾರಿಗೆ ಬಂದಿದ್ದು, ಎಐಸಿಟಿಇ 7ನೇ ಪರಿಷ್ಕೃತ ವೇತನ ಶ್ರೇಣಿಯನ್ವಯ ಮತ್ತು ಎಐಸಿಟಿಇಯ ಇತರ ಮಾರ್ಗಸೂಚಿಗಳನ್ನು ಹಾಗೂ ರಾಜ್ಯ ಸರ್ಕಾರದ ನಿಯಮ/ಆದೇಶ/ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ, ನೂತನ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ದಿನಾಂಕ:13.12.2022ರಂದು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಗೆ ವೃಂದ ಪರಿಶೀಲನಾ ಸಮಿತಿ ಸದಸ್ಯ ಇಲಾಖೆಗಳಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನಾ ರಚನಾ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆಯಲು ಕ್ರಮವಹಿಸಲಾಗುತ್ತಿದೆ. ಪ್ರಸ್ತುತ, ಮಾರ್ಚ್ 2019 ರಂದು 07 ನೇ ಪರಿಷ್ಕೃತ ಎಐಸಿಟಿಇ ನಿಯಮಗಳು ಜಾರಿಗೆ ಬಂದಿದ್ದು, ಸದರಿ ನಿಯಮಗಳನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಳ್ಳುವ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ. ಎಐಸಿಟಿಇ ಮಾರ್ಗಸೂಚಿಗಳನ್ವಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಾಂಶುಪಾಲರ ಹುದ್ದೆಯನ್ನು ಭರ್ತಿ ಮಾಡಬೇಕಾಗಿದ್ದು, ಪ್ರಸ್ತುತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಲು ಕ್ರಮವಹಿಸಿದ್ದು, ವೃಂದ ಮತ್ತು ನೇಮಕಾತಿ ನಿಯಮಗಳು ತಿದ್ದುಪಡಿ ಆದ ನಂತರದಲ್ಲಿ ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.

ಇಡಿ 330 ಡಿಸಿಇ 2022

(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು